**CC 683/2019**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್ 683/2019**

**ಸಿ ಡಬ್ಲೂ -5**

**ಪಿ ಡಬ್ಲೂ -3**

| | |
|---|---|
| **ಸಾಕ್ಷಿಯ ಹೆಸರು -** | **ಕೃಷ್ಣ** |
| **ತಂದೆಯ ಹೆಸರು -** | **ರಾಮಪ್ಪ** |
| **ವಯಸ್ಸು -** | **38 ವರ್ಷಗಳು** |
| **ಉದ್ಯೋಗ -** | **ವ್ಯವಸಾಯ** |
| **ವಾಸಸ್ಥಳ -** | **ಗುಂಡಾ, ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 28-11-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ **3** ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ **3(**ಬಿ**)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಸುಮಾರು **3-4** ವರ್ಷಗಳ ಹಿಂದೆ ಪೋಲಿಸ್ ಠಾಣೆಯಲ್ಲಿ ಮಾಡಿದ್ದೆ. ನಿಪಿಃ **3** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 04-09-2017 ರಂದು ಪರಕರಣದ ತನಿಕಾಧಿಕಾರಿಯ ನನ್ನನ್ನು ಮತ್ತು ಚಾಸಾ -4 ರವರನ್ನು ಠಾಣೆಗೆ ಬರಮಾಡಿಕೊಂಡು ಚಾಸಾ -1 ರವರನ್ನು ಪರಿಚಯಿಸಿ ಅವರು ತೋರಿಸಿದ ಸ್ಥ್ವಳದಲ್ಲಿ ಪಂಚನಾಮೆ ಮಾಡಲು ಸಹಕರಿಸುವಂತೆ ಕೇಳಿಕೊಂಡಿದ್ದರು ಅಂದರೆ ಸರಿಯಲ್ಲ. ಚಾಸಾ -1 ರವರು ನಮ್ಮನ್ನು ಹೊಸಪೇಟೆಯ ಹಳೇ ಉಪ ನೋಂದಣಾಧಿಕಾರಿಗಳ ಕಚೇರಿ ಮತ್ತು ಹಾಲಿ ಪೋಲಿಸ್ ಉಪ ಅಧಿಕ್ಷಕರು, ಕರ್ನಾಟಕ ಲೋಕಾಯುಕ್ತ ಕಚೇರಿಗೆ ಕರೆದುಕೊಂಡು ಹೋಗಿ ಕೃತ್ಯ ನಡೆದ ಸ್ಥ್ವಳ ಎಂದು ತೋರಿಸಿದ್ದರು ಅಂದರೆ ಸರಿಯಲ್ಲ. ಆಗಲೇ ನಿಪಿಃ 3 ರ ಪಂಚನಾಮೆ ಬರೆಯಲಗಿತ್ತು ಅಂದರೆ ಸರಿಯಲ್ಲ. ನಿಪಿಃ 3 ಕ್ಕೆ ಸ್ಥ್ವಳದಲ್ಲೆ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಆಗಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

<u>**ಪಾಟೀ ಸವಾಲು ಆರೋಪಿ ಪರ ಶ್ರೀ ಎಂ. ಬಿ.ಪಿ.ಎನ್ ವಕೀಲರಿಂದಃ** ಇಲ್ಲಾ.</u>

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.